ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಪ್ರಕೃತಿ ವಿಕೋಪದಿಂದ ಹಾನಿ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

580 (623) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದಿಂದ ಪ್ರಕೃತಿ ವಿಕೋಪದ ನಿರ್ವಹಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಈ ವರ್ಷದಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ಆಸ್ತಿಗಳ ಬಗ್ಗೆ ಸರ್ವೆ ಮಾಡಿಸಲಾಗಿದೆಯೇ; ಎಷ್ಟು ಸಾರ್ವಜನಿಕ ಆಸ್ತಿ, ರೈತರ ಜಮೀನಿಗೆ ಹಾನಿಯಾಗಿದೆ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹಾನಿಯಾದ ಜಮೀನಿನ ರೈತರಿಗೆ ಪರಿಹಾರ ಒದಗಿಸಲಾಗಿದೆಯೇ; ಒದಗಿಸಿದ್ದಲ್ಲಿ, ಎಷ್ಟು ಒದಗಿಸಲಾಗಿದೆ; (ವಿವರ ನೀಡುವುದು)

(ಈ) ಹೊಸದಾಗಿ ಮನೆ ನಿರ್ಮಿಸಿ ಕೊಡಲು ಸರ್ಕಾರ ರೂಪಿಸಿರುವ ನಿಯಮ/ಮಾರ್ಗಸೂಚಿಗಳೇನು;

(ಉ) ರಾಜ್ಯದಲ್ಲಿ ಪ್ರಸ್ತುತ ವರ್ಷದಲ್ಲಿ ಪ್ರಕೃತಿ ವಿಕೋಪದಿಂದ ಮನೆ ಕಳೆದುಕೊಂಡಿರುವ ಕುಟುಂಬಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಮನೆ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು;

(ಊ) ಎಷ್ಟು ಸಮಯದೊಳಗೆ ಸಂತ್ರಸ್ಥರಿಗೆ ಸರ್ಕಾರದಿಂದ ಮನೆಗಳನ್ನು ನಿರ್ಮಿಸಿ ಕೊಡಲಾಗುವುದು?